ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 : ದಿನಾಂಕ : 13–08–2018

# ಮಾಧ್ಯಮದವರ ಗಮನಕ್ಕೆ

72 ನೇ ಸ್ವಾತಂತ್ರ್ಯ ದಿನಾಚರಣೆಯ ರಾಜ್ಯಮಟ್ಟದ ಸಮಾರಂಭದ ವರದಿಗಾಗಿ ಮಾಧ್ಯಮದವರಿಗೆ ಆಮಂತ್ರಣ ಪತ್ರಿಕೆಗಳನ್ನು ನಗರದ ಭಗವಾನ್ ಮಹಾವೀರ ರಸ್ತೆಯಲ್ಲಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸೌಧದ ಎರಡನೇ ಮಹಡಿಯಲ್ಲಿರುವ ಬೆಂಗಳೂರು ನಗರ ಜಿಲ್ಲೆಯ ಉಪ ನಿರ್ದೇಶಕರ ಕಚೇರಿಯಲ್ಲಿ ಆಗಸ್ಟ್ 14 ರಂದು ಮಂಗಳವಾರ ಬೆಳಿಗ್ಗೆ 11–30 ಗಂಟೆಯಿಂದ ಸಂಜೆ 5–00 ಗಂಟೆಯವರೆಗೆ ವಿತರಿಸಲಾಗುವುದು.

# ಪತ್ರಿಕಾ ಆಮಂತ್ರಣ

1. ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಪ್ರಾರಂಭಿಕ ಸಭೆ:

   ದಿನಾಂಕ: 14–08–2018 ಮಂಗಳವಾರ ಸಮಯ: ಬೆಳಿಗ್ಗೆ 11–00 ಗಂಟೆಗೆ
   ಸ್ಥಳ: ಸಮ್ಮೇಳನ ಸಭಾಂಗಣ, ಶಾಸಕರ ಭವನ–2, ಬೆಂಗಳೂರು

# ಪತ್ರಿಕಾ ಪ್ರಕಟಣೆ

ಸಂಖ್ಯೆ: 817/917

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ)

ಕಂದಾಯ ಸಚಿವ ಆರ್.ವಿ. ದೇಶಪಾಂಡೆ ಅವರು ಆಗಸ್ಟ್ 17 ರಂದು ಕೋಲಾರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ: 818/918

## ಸ್ವಾತಂತ್ರ್ಯೋತ್ಸವ ಆಚರಣೆ ಸಮಯದಲ್ಲಿ ಬಿಗಿ ಬಂದೋಬಸ್ತ್

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ)

ನಗರದ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಆಗಷ್ಟ್ 15 ರಂದು ಹಮ್ಮಿಕೊಂಡಿರುವ ಸ್ವಾತಂತ್ರ್ಯೋತ್ಸವದ ಕಾರ್ಯಕ್ರಮ ಸುಲಲಿತವಾಗಿ ನಡೆಯಲು ಹಾಗೂ ಮೈದಾನದ ಭದ್ರತೆಯ ಸಲುವಾಗಿ ಮುಂಜಾಗರೂಕತಾ ಕ್ರಮ ಕೈಗೊಳ್ಳಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಟಿ.ಸುನೀಲ್ ಕುಮಾರ್ ಅವರು ತಿಳಿಸಿದರು.

ಇಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಕಳೆದ 15 ದಿನಗಳಿಂದ ಮೈದಾನಕ್ಕೆ ಪೊಲೀಸರನ್ನು ಕಣ್ಗಾವಲು ಕರ್ತವ್ಯಕ್ಕೆ ನಿಯೋಜಿಸಲಾಗಿದೆ. ಬೆಂಗಳೂರು ನಗರದ ಹೋಟೆಲ್, ಲಾಡ್ಜ್‌ಗಳು, ತಂಗುದಾಣಗಳು, ಇನ್ನಿತರೆ ಸ್ಥಳಗಳಲ್ಲಿ ಅನುಮಾನಾಸ್ಪದವಾಗಿ ವಾಸ್ತವ್ಯ ಹೂಡುವವರ ಮೇಲೆ ಸೂಕ್ತ ನಿಗಾ ವಹಿಸಲಾಗಿರುತ್ತದೆ.

ಆಗಷ್ಟ್ 15 ರಂದು ನಡೆಯುವ ಧ್ವಜಾರೋಹಣ, ಕವಾಯಿತು ಹಾಗೂ ಸಾಂಸ್ಕೃತಿ ಸಮಾರಂಭದ ಉದ್ಘಾಟನೆಯನ್ನು ಮುಖ್ಯಮಂತ್ರಿಗಳು ನೆರವೇರಿಸಲಿದ್ದು, ಈ ಸಂಬಂಧ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಬೆಂಗಳೂರು ನಗರದ ಎಲ್ಲಾ ವಿಭಾಗಗಳಿಂದ 09–ಡಿ.ಸಿ.ಪಿ. 16–ಎ.ಸಿ.ಪಿ. , 46 ಪಿ.ಐ. , 102 ಪಿ.ಎಸ್.ಐ, 77 ಎ.ಎಸ್.ಐ. 540 ಹೆಚ್.ಸಿ./ಪಿಸಿ , 75 ಮಹಿಳಾ ಸಿಬ್ಬಂದಿಗಳೊಂದಿಗೆ 114 ಸಾದಾ ಉಡುಪಿನ ಅಧಿಕಾರಿ ಮತ್ತು ಸಿಬ್ಬಂದಿಗಳು ಮತ್ತು 56 ಜನ ಕ್ಯಾಮೆರಾ ಕರ್ತವ್ಯಕ್ಕೆ ಸಿಬ್ಬಂದಿಗಳನ್ನು ಬಂದೋಬಸ್ತ್‌ಗಾಗಿ ನಿಯೋಜಿಸಲಾಗಿದೆ.

ಸಂಚಾರ ನಿರ್ವಹಣೆಗಾಗಿ 02–ಡಿಸಿಪಿ, 07–ಎಸಿಪಿ, 24–ಪಿಐ, 38–ಪಿಎಸ್ಐ, 61 ಎಸ್ಐ, 263/ಹೆಚ್‌ಸಿ/ಪಿಸಿ ಒಟ್ಟಾರೆ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮದ ಪ್ರಯುಕ್ತ ಸುಮಾರು 1500 ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸಲಾಗಿದೆ.

ಮೈದಾನದ ಬಂದೋಬಸ್ತ್ ಕರ್ತವ್ಯಕ್ಕೆ 09 ಕೆ.ಎಸ್.ಆರ್.ಪಿ. ಮತ್ತು 05 ಸಿ.ಎ.ಆರ್. ತುಕಡಿಗಳನ್ನು, 03 ಅಗ್ನಿಶಾಮಕ ವಾಹನಗಳು, 02–ಆಂಬುಲೆನ್ಸ್ ವಾಹನಗಳು, 2 ಕ್ಷಿಪ್ರ ಕಾರ್ಯಾಚರಣೆ ಪಡೆ, 01–ಡಿ–ಸ್ವಾಟ್, 01–ಆರ್.ಐ.ವಿ.ಗಳನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿರುತ್ತದೆ. ಒಂದು ಗರುಡ ಪೋರ್ಸ್ ಅನ್ನು ಕಾಯ್ದಿರಿಸಲಾಗಿದೆ.

ಮೈದಾನದ ಸುತ್ತ ಎಲ್ಲಾ ಘಟನೆಗಳನ್ನು ಸೂಕ್ಷವಾಗಿ ನಿಗಾವಹಿಸಲು 50 ಸಿಸಿಟಿವಿ ಕ್ಯಾಮರಾಗಳನ್ನು ಮತ್ತು 04 ಬ್ಯಾಗೇಜ್ ಸ್ಕಾನರ್‌ಗಳನ್ನು ಅಳವಡಿಸಲಾಗಿರುತ್ತದೆ.

ಭದ್ರತೆಯ ಅಂಗವಾಗಿ ಮೈದಾನಕ್ಕೆ ಆಗಮಿಸುವ ಎಲ್ಲಾ ಪ್ರೇಕ್ಷರುಗಳು ಗೇಟ್‌ಗಳ ಬಳಿ ತಪಾಸಣೆಗೆ ಪೊಲೀಸರೊಂದಿಗೆ ಸಹಕರಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಮೈದಾನದೊಳಗಡೆ ಸಿಗರೇಟ್, ಬೆಂಕಿಪೆಟ್ಟಿಗೆ, ಹರಿತವಾದ ವಸ್ತು ಹಾಗೂ ಚಾಕು–ಚೂರಿಗಳು, ಕರಪತ್ರಗಳು, ಕಪ್ಪು ಕರವಸ್ತ್ರಗಳು, ಬಣ್ಣದ ದ್ರಾವಣಗಳು, ತಿಂಡಿ, ತಿನಿಸುಗಳು, ವಿಡಿಯೋ ಮತ್ತು ಸ್ಟಿಲ್ ಕ್ಯಾಮರಾಗಳು, ಮದ್ಯದ ಬಾಟಲ್‌ಗಳು/ಮಾದಕವಸ್ತುಗಳು, ನೀರಿನ ಬಾಟಲ್‌ಗಳು ಹಾಗೂ ಕ್ಯಾನ್‌ಗಳು, ಬಾವುಟಗಳು ಶಸ್ತ್ರಾಸ್ತ್ರಗಳು, ಪಟಾಕಿ ಮತ್ತು ಸ್ಫೋಟಕ ವಸ್ತುಗಳನ್ನು ಮೈದಾನಗೊಳಗೆ ನಿಷೇದಿಸಲಾಗಿದೆ ಎಂದು ತಿಳಿಸಿದರು.

ಸಂಖ್ಯೆ: 819/919

# ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಿದ್ದತೆ

**ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ)**

ಭಾರತದ ಸ್ವಾತಂತ್ರ್ಯ ದಿನಾಚರಣೆಯ ರಾಜ್ಯಮಟ್ಟದ ಸಮಾರಂಭವನ್ನು ಆಗಸ್ಟ್ 15 ರಂದು ನಗರದ ಮಹಾತ್ಮಾ ಗಾಂಧಿ ರಸ್ತೆಯ ಫೀಲ್ಡ್ ಮಾರ್ಷಲ್ ಮಾಣಿಕ್‌ಷಾ ಪೆರೇಡ್ ಮೈದಾನದಲ್ಲಿ ಆಯೋಜಿಸಲಾಗಿದೆ.

ಸಮಾರಂಭಕ್ಕಾಗಿ ಮೈದಾನವನ್ನು ಸಿದ್ದಗೊಳಿಸಲಾಗಿದೆ. ಶಾಮಿಯಾನ, ವೇದಿಕೆಯ ನಿರ್ಮಾಣ, ಬ್ಯಾರಿಕೇಡಿಂಗ್ ಮತ್ತು ಆಸನಗಳ ವ್ಯವಸ್ಥೆ ಮಾಡಲಾಗಿದೆ. ವೇದಿಕೆಗೆ ಅಲಂಕಾರಿಕ ಬ್ರಾಸ್ ಪರಿಕರಗಳನ್ನು ಅಳವಡಿಸಲಾಗಿದ್ದು, ಧ್ವಜಾರೋಹಣ ಮಾಡಲು ಧ್ವಜ ಸ್ಥಂಬ ನಿರ್ಮಿಸಲಾಗಿದೆ. ಬೆಳಿಗ್ಗೆ 8.58 ಗಂಟೆಗೆ ಮುಖ್ಯಮಂತ್ರಿಗಳು ಆಗಮಿಸುತ್ತಾರೆ. ಭಾರತೀಯ ರಕ್ಷಣಾ ಸೇವೆಯ ಮೂವರು ಹಿರಿಯ ಅಧಿಕಾರಿಗಳನ್ನು ಮುಖ್ಯಮಂತ್ರಿಗಳಿಗೆ ಪರಿಚಯಿಸಲಾಗುತ್ತದೆ.

ಮುಖ್ಯಮಂತ್ರಿಗಳು ಬೆಳಿಗ್ಗೆ 9–00 ಗಂಟೆಗೆ ರಾಷ್ಟ್ರ ಧ್ವಜಾರೋಹಣ ನೆರವೇರಿಸುತ್ತಾರೆ. ಈ ಸಂದರ್ಭದಲ್ಲಿ ಪುಷ್ಪವೃಷ್ಠಿ ಮಾಡಲು ಭಾರತೀಯ ವಾಯುಪಡೆಯ ಹೆಲಿಕಾಪ್ಟರ್ ವ್ಯವಸ್ಥೆ ಮಾಡಲಾಗಿರುತ್ತದೆ. ಧ್ವಜಾರೋಹಣದ ನಂತರ ಮುಖ್ಯಮಂತ್ರಿಗಳು ಪೆರೇಡ್ ವಿಕ್ಷೀಸಿ, ಗೌರವ ರಕ್ಷೆ ಸ್ವೀಕರಿಸಿ ನಂತರ ನಾಡಿನ ಜನತೆಗೆ ಸ್ವಾತಂತ್ರ್ಯೋತ್ಸವದ ಸಂದೇಶ ನೀಡುತ್ತಾರೆ.

ಪಥಸಂಚಲನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಪೂರ್ವಭಾವಿ ತಾಲೀಮನ್ನು ದಿನಾಂಕ 11–8–2018 ರಿಂದ 3 ದಿನಗಳ ಕಾಲ ಸತತವಾಗಿ ನಡೆಸಲಾಗುತ್ತಿದೆ.

ಪಥಸಂಚಲನದಲ್ಲಿ ಗೋವಾ ಪೊಲೀಸ್, ಸ್ಕೌಟ್ಸ್, ಗೈಡ್ಸ್, ಎನ್‌ಸಿಸಿ ಸೇವಾದಳ ಹಾಗೂ ವಿವಿಧ ಶಾಲೆಗಳ ಮಕ್ಕಳನ್ನೊಳಗೊಂಡಂತೆ ಕವಾಯಿತು ಮತ್ತು ಬ್ಯಾಂಡ್‌ನ ಒಟ್ಟು 34 ತುಕಡಿಗಳಲ್ಲಿ ಸುಮಾರು 1130 ಮಂದಿ ಭಾಗವಹಿಸಲಿದ್ದಾರೆ. ಶಾಲಾ ಮಕ್ಕಳ ಒಟ್ಟು 3 ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸುಮಾರು 2000 ಮಕ್ಕಳು ಭಾಗವಹಿಸಲಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮಗಳ ನಂತರ ಮುಖ್ಯಮಂತ್ರಿಗಳಿಂದ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮವಿದೆ.

ಸಾಂಸ್ಕೃತಿಕ ಕಾರ್ಯಕ್ರಮಗಳು:

ನಾಡಗೀತೆ ಮತ್ತು ರೈತಗೀತೆ, ಶ್ರೀ ಕಿಕ್ಕೇರಿ ಕೃಷ್ಣಮೂರ್ತಿ ಮತ್ತು ತಂಡದವರಿಂದ, ಕ್ರಾಂತಿವೀರ ಮುಂಡರಗಿ ಭೀಮರಾಯ, ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ, ಗೃಹಲಕ್ಷ್ಮಿ ಬಡಾವಣೆ, ನೆಲಗದರನಹಳ್ಳಿ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು 560 ಮಕ್ಕಳಿಂದ, ಯೋಗ ಮಾನ್ಸಿ ಗುಲಾಟಿ ಅವರಿಂದ  ದೇಶಭಕ್ತ ಮೈಲಾರ ಮಹಾದೇವ ಬಿ.ಬಿ.ಎಂ.ಪಿ. ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜು, ಭೈರವೇಶ್ವರ ನಗರ, ಬೆಂಗಳೂರು ದಕ್ಷಿಣ ಜಿಲ್ಲೆ – 650 ಮಕ್ಕಳಿಂದ,  ಜೈಹಿಂದ್ ಜೈ ಭಾರತ್ ಲಿಲ್ಲಿ ರೋಸ್ ಪ್ರೌಢಶಾಲೆ, ಬೆಂಗಳೂರು ದಕ್ಷಿಣ ವಲಯ, ಬನ್ನೇರುಘಟ್ಟ ರಸ್ತೆ, ಬೆಂಗಳೂರು 750 ಮಕ್ಕಳಿಂದ , ಜಿಮ್ನಾಸ್ಟಿಕ್ಸ್ ಮದ್ರಾಸ್ ಇಂಜಿನಿಯರಿಗ್ ಗ್ರೂಫ್, ಬೆಂಗಳೂರು–15 ಸದಸ್ಯರಿಂದ  ಎಎಸ್‌ಸಿ ಟಾರ್ನೆಡೋಸ್ 39 ಸದಸ್ಯರಿಂದ ಮೋಟಾರ್ ಸೈಕಲ್ ಪ್ರದರ್ಶನ ನೀಡುವವರು ಮಿಲಿಟರಿ ಎಎಸ್‌ಸಿ ಸೆಂಟರ್‌ಸೌತ್, ಪಥಸಂಚಲನ ಮತ್ತು ಸಾಂಸ್ಕೃತಿಕ ಮತ್ತು ಕಾರ್ಯಕ್ರಮಗಳ ತಾಲೀಮಿನಲ್ಲಿ ಭಾಗವಹಿಸುತ್ತಿರುವ ಶಾಲಾ ಮಕ್ಕಳಿಗೆ ಪ್ರತಿದಿನ ಉಪಹಾರ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ.

ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮದ ಪ್ರಯುಕ್ತ ಮೈದಾನಕ್ಕೆ ಸೂಕ್ತ ಬಂದೋಬಸ್ತ್ ವ್ಯವಸ್ಥೆ, ಮೈದಾನದಲ್ಲಿ ಭದ್ರತೆ ಮತ್ತು ಸುರಕ್ಷತೆಗಾಗಿ 50 ಸಿ.ಸಿ. ಕ್ಯಾಮೆರಾ ವ್ಯವಸ್ಥೆ ಹಾಗೂ 04 ಬ್ಯಾಗೇಜ್ ಸ್ಕ್ಯಾನರ್‌ಮತ್ತು ವ್ಯವಸ್ಥಿತ ಸಂಚಾರ ನಿಯಂತ್ರಣ ವ್ಯವಸ್ಥೆಗಳನ್ನು ಮಾಡಲಾಗಿರುತ್ತದೆ. ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಯಾವುದೇ ಆಕಸ್ಮಿಕ ವಿಪತ್ತು ಸಂಭವಿಸಿದಲ್ಲಿ ತಕ್ಷಣ ಪ್ರತಿಕ್ರಿಯಿಸಲು ಅಗತ್ಯವಿರುವಷ್ಟು ಆಂಬ್ಯುಲೆನ್ಸ್‌ಗಳನ್ನು ವೈದ್ಯಕೀಯ ಹಾಗೂ ವೈದ್ಯಕೀಯೇತರ ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳಲಾಗಿರುತ್ತದೆ ಹಾಗೂ ನಗರದ ಹಲವು ಆಸ್ಪತ್ರೆಗಳನ್ನು ಗುರುತಿಸಿದ್ದು ಸಾಕಷ್ಟು ಸಂಖ್ಯೆಯಲ್ಲಿ ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ.

ಆಕಸ್ಮಿಕ ಬೆಂಕಿ ಅವಘಡಗಳನ್ನು ನಿಭಾಯಿಸಲು ಅಗ್ನಿಶಾಮಕ ವಾಹನಗಳೊಂದಿಗೆ ಸಾಕಷ್ಟು ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳಲಾಗಿದೆ. ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮವನ್ನು ವೀಕ್ಷಿಸಲು ಆಗಮಿಸುವ ಅತಿಗಣ್ಯ/ಗಣ್ಯ ಇತರೆ ಆಹ್ವಾನಿತರಿಗೆ/ ಸಾರ್ವಜನಿಕರಿಗೆ ಪ್ರತ್ಯೇಕವಾಗಿ ಈ ಕೆಳಕಂಡಂತೆ ಆಸನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.

ಜಿ2 ಪ್ರವೇಶ ದ್ವಾರದಲ್ಲಿ ಅತಿಗಣ್ಯಗಳಿಗಾಗಿ 1200 ಆಸನಗಳು, ಜಿ1 ಪ್ರವೇಶ ದ್ವಾರದಲ್ಲಿ ಗಣ್ಯವ್ಯಕ್ತಿಗಳು/ಸ್ವಾತಂತ್ರ್ಯಹೋರಾಟಗಾರರು/ರಕ್ಷಣಾ ಇಲಾಖೆಯ ಅಧಿಕಾರಿಗಳೂ/ಪತ್ರಿಕಾ ಪ್ರತಿನಿಧಿಗಳಿಗಾಗಿ 750 ಆಸನಗಳು, ಜಿ3 ಪ್ರವೇಶ ದ್ವಾರದಲ್ಲಿ ಇತರೆ ಎಲ್ಲಾ ಇಲಾಖೆಯ ಅಧಿಕಾರಿಗಳು/ನಿವೃತ್ತ ಸೇನಾಧಿಕಾರಿಗಳೂ/ಬಿಎಸ್‌ಎಫ್ ಅಧಿಕಾರಿಗಳಿಗಾಗಿ 2500 ಆಸನಗಳು, ಜಿ4 ಪ್ರವೇಶ ದ್ವಾರದಲ್ಲಿ ಸಾರ್ವಜನಿಕರಿಗಾಗಿ 7000 ಆಸನಗಳು.

ಸಾರ್ವಜನಿಕರಿಗಾಗಿ ಇರುವ ವೀಕ್ಷಣಾ ಗ್ಯಾಲರಿಯನ್ನು ವಿಸ್ತರಿಸಿ ಹೆಚ್ಚು ಸಾರ್ವಜನಿಕರು ಕಾರ್ಯಕ್ರಮ ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ. ಈ ಭಾರಿ ವಿಶೇಷ ವರ್ಗದವರನ್ನು ಆಹ್ವಾನಿಸಿದ್ದು, ಲೈಂಗಿಕ ಅಲ್ಪಸಂಖ್ಯಾತರು, ಹೆಚ್.ಐ.ವಿ. ಪೀಡಿತರು, ಅನಾಥ ಮಕ್ಕಳು, ವಯೋವೃದ್ಧರು, ಬುದ್ಧಿಮಾಂದ್ಯರು, ಅಂಗವಿಕಲರು ಹಾಗೂ ವಿವಿಧ ಜಿಲ್ಲೆಗಳಿಂದ ಕೃಷಿಯಲ್ಲಿ ಸಾಧನೆಗೈದ ರೈತಾಪಿ ವರ್ಗದವರನ್ನು ಕಾರ್ಯಕ್ರಮ ವೀಕ್ಷಿಸಲು ಆಹ್ವಾನಿಸಲಾಗಿರುತ್ತದೆ.

2018–19 ನೇ ಸಾಲಿನ ಜುಲೈ 2018 ರ ಆಯವ್ಯಯ ಭಾಷಣದಲ್ಲಿ ಹಸಿರು ಕರ್ನಾಟಕ ಯೋಜನೆಯನ್ನು ಅನುಷ್ಠಾನಗೊಳಿಸಲು ಘೋಷಿಸಲಾಗಿದ್ದು ಮಾನ್ಯ ಮುಖ್ಯಮಂತ್ರಿಗಳಿಂದ ಸಸಿ ನೆಡುವ ಮತ್ತು ಸಸಿ ವಿತರಣೆ ಮಾಡುವ ಮೂಲಕ ಹಸಿರು ಕರ್ನಾಟಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ: 819/919

## ಸ್ವಾತಂತ್ರ್ಯೋತ್ಸವ ದಿನಾಚರಣೆ
## ಬೆಂಗಳೂರು ಸಂಚಾರ ಪೊಲೀಸರಿಂದ ವಿಶೇಷ ಮನವಿ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ)

ನಗರದ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಮೈದಾನದಲ್ಲಿ ಆಗಷ್ಟ್ 15ರಂದು ಹಮ್ಮಿಕೊಂಡಿರುವ ಸ್ವಾತಂತ್ರ್ಯೋತ್ಸವ ದಿನಾಚರಣೆ ಸಂದರ್ಭದಲ್ಲಿ ಮೈದಾನದ ಹಾಗೂ ಸುತ್ತಮುತ್ತ ವಾಹನಗಳ ನಿಲುಗಡೆಗೆ ಸ್ಥಳವಕಾಶ ಕೊರತೆ ಇರುವುದರಿಂದ ಸಾರ್ವಜನಿಕರು ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಸಾರ್ವಜನಿಕ ಸಾರಿಗೆ ವ್ಯವಸ್ಥೆ ಮತ್ತು ಮೆಟ್ರೋ ಸೇವೆಯನ್ನು ಬಳಸಲು ಬೆಂಗಳೂರು ನಗರ ಪೊಲೀಸ್ ಆಯುಕ್ತರು ಮನವಿ ಮಾಡಿದ್ದಾರೆ.

ಕಾಮರಾಜ ರಸ್ತೆ, ಕಾವೇರಿ ಆರ್ಟ್ಸ್ ಮತ್ತು ಕ್ರಾಫ್ಟ್ ಜಂಕ್ಷನ್‌ನಿಂದ ಕಬ್ಬನ್ ರಸ್ತೆವರೆಗೆ (ಪಶ್ಚಿಮದ ಕಡೆಗೆ) ಸೆಂಟ್ರಲ್ ಸ್ಟ್ರೀಟ್, ಅನಿಲ್ ಕುಂಬ್ಳೆ ವೃತ್ತದಿಂದ ಶಿವಾಜಿನಗರ ಬಸ್ ನಿಲ್ದಾಣದವರೆಗೆ, ಕಬ್ಬನ್ ರಸ್ತೆ, ಸಿ.ಟಿಓ. ವೃತ್ತದಿಂದ ಕೆ.ಆರ್.ರಸ್ತೆ ಮತ್ತು ಕಬ್ಬನ್ ರಸ್ತೆ

ಜಂಕ್ಷನ್‌ವರೆಗೆ, ಎಂ.ಜಿ. ರಸ್ತೆ, ಅನಿಲ್ ಕುಂಬ್ಳೆ ವೃತ್ತದಿಂದ ಕ್ವೀನ್ಸ್ ವೃತ್ತದವರೆಗೆ ವಾಹನ ನಿಲುಗಡೆ ನಿಷೇದಿಸಲಾಗಿದೆ.

ಕಾರ್ಯಕ್ರಮದ ಅಂಗವಾಗಿ ಬೆಂಗಳೂರು ನಗರ ಸಂಚಾರ ಪೊಲೀಸರು ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಕವಾಯತು ಮೈದಾನದ ಒಳಗಡೆ ಮತ್ತು ಸುತ್ತ ಮುತ್ತಲು ಆ ದಿನಕ್ಕಾಗಿ ವಿಶೇಷ ಸಂಚಾರ ವ್ಯವಸ್ಥೆಯನ್ನು ಮಾಡಲಾಗಿದೆ.

ಹಳದಿ ಕಾರ್ ಪಾಸ್‌ಗಳನ್ನು ಹೊಂದಿರುವ ಎಲ್ಲಾ ಆಹ್ವಾನಿತರು ಕಬ್ಬನ್ ರಸ್ತೆಯಲ್ಲಿ ಸಂಚರಿಸಿ ಮಾಣಿಕ್ ಷಾ ಪೆರೇಡ್ ಮೈದಾನಕ್ಕೆ ಉತ್ತರಾಭಿಮುಖವಾಗಿರುವ ಪ್ರವೇಶ ದ್ವಾರ–1 ರ ಮುಖಾಂತರ ಒಳ ಪ್ರವೇಶಿಸಿ ತಮ್ಮ ವಾಹನಗಳನ್ನು ಪೆರೇಡ್ ಮೈದಾನದ ಪಶ್ಚಿಮ ಭಾಗದಲ್ಲಿ ನಿಲುಗಡೆ ಮಾಡುವಂತೆ ತಿಳಿಸಲಾಗಿದೆ.

ಬಿಳಿ ಕಾರ್ ಪಾಸ್‌ಗಳನ್ನು ಹೊಂದಿರುವ ಎಲ್ಲಾ ಗಣ್ಯರು, ಸಚಿವರುಗಳು ಸರ್ಕಾರದ ಕಾರ್ಯದರ್ಶಿಗಳು, ರಕ್ಷಣಾ ಅಧಿಕಾರಿಗಳು, ಹಿರಿಯ ಪೊಲೀಸ್ ಅಧಿಕಾರಿಗಳು ಕಬ್ಬನ್ ರಸ್ತೆಯಲ್ಲಿ ಸಂಚರಿಸಿ, ಪ್ರವೇಶ ದ್ವಾರ–2 ರ ಮುಖಾಂತರ ಒಳ ಪ್ರವೇಶಿಸಿ ನಂತರ ಪೆರೇಡ್ ಮೈದಾನದ ಪಶ್ಚಿಮ ಭಾಗದಲ್ಲಿ ವಾಹನಗಳ ನಿಲುಗಡೆ ಪ್ರದೇಶದಲ್ಲಿ ನಿಲುಗಡೆ ಮಾಡುವಂತೆ ಕೋರಲಾಗಿದೆ.

ಪಿಂಕ್ ಪಾಸ್‌ಗಳನ್ನು ಹೊಂದಿರುವ ಆಹ್ವಾನಿತರು ತಮ್ಮ ವಾಹನಗಳನ್ನು ಮೈನ್‌ಗಾರ್ಡ್ ಕ್ರಾಸ್ ರಸ್ತೆ . ಸಫೀನಾ ಪ್ಲಾಜಾ ಮುಂಭಾಗ, ಕಾಮರಾಜ ರಸ್ತೆ ಆರ್ಮಿ ಪಬ್ಲಿಕ್ ಶಾಲೆ ಮುಂಭಾಗ ಮತ್ತು ಆರ್.ಎಸ್.ಐ. ಗೇಟ್ ಮುಂಭಾಗ (ಉತ್ತರದ ಕಡೆ) ನಿಲುಗಡೆ ಮಾಡಿ ಪ್ರವೇಶದ್ವಾರ 3ರ ಮೂಲಕ ಪ್ರವೇಶ ಮಾಡಬಹುದಾಗಿದೆ.

ಹಸಿರು ಬಣ್ಣದ ಪಾಸ್‌ಗಳನ್ನು ಹೊಂದಿರುವವರು ತಮ್ಮ ವಾಹನಗಳನ್ನು ಶಿವಾಜಿನಗರ ಬಸ್ ನಿಲ್ದಾಣ 1 ನೇ ಮಹಡಿಯ ವಾಹನ ನಿಲುಗಡೆ ಸ್ಥಳದಲ್ಲಿ ನಿಲುಗಡೆ ಮಾಡಿ ಪೆರೇಡ್ ಮೈದಾನದ ಪ್ರವೇಶದ್ವಾರ 4 ಮತ್ತು 5 ರ ಮುಖಾಂತರ ಕಾಲ್ನಡಿಗೆಯಲ್ಲಿ ಒಳ ಪ್ರವೇಶಿಸುವಂತೆ ಕೋರಲಾಗಿದೆ.

ಕಾರ್ಯಕ್ರಮಕ್ಕೆ ಬರುವ ಎಲ್ಲಾ ಮಾಧ್ಯಮದವರ ವಾಹನಗಳು, ಡಿ.ಸಿ.ಸಪಿ. ಮತ್ತು ಮೇಲ್ಪಟ್ಟ ಅಧಿಕಾರಿಗಳು ಹಾಗೂ ಇತರೆ ಇಲಾಖೆಗಳ ಮೇಲಧಿಕಾರಿಗಳ ವಾಹನಗಳ ಪ್ರವೇಶ ದ್ವಾರ 3 ಮೂಲಕ ಒಳಪ್ರವೇಶಿಸಿ ಮೈದಾನದ ಪೂರ್ವಭಾಗದಲ್ಲಿ ವಾಹನ ನಿಲುಗಡೆ ಮಾಡಬಹದಾಗಿದೆ.

ಕವಾಯಿತು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾರ್ವಜನಿಕರುಗಳನ್ನು ವಿದ್ಯಾರ್ಥಿಗಳನ್ನು ಕರೆತರುವ ಎಲ್ಲಾ ಬಸ್‌ಗಳು ಪ್ರವೇಶ ದ್ವಾರ–1 ರ ಬಳಿ ನಿಲ್ಲಿಸಿ, ಮಕ್ಕಳನ್ನು ಇಳಿಸಿ ನಂತರ ತಮ್ಮ ವಾಹನಗಳನ್ನು ಎಂ.ಜಿ. ರಸ್ತೆಯಲ್ಲಿ ಅನಿಲ್ ಕುಂಬ್ಳೆ ವೃತ್ತದಿಂದ ಮೆಟ್ರೋ ನಿಲ್ದಾಣದ ವರೆಗೆ ರಸ್ತೆಯ ಉತ್ತರ ಭಾಗದಲ್ಲಿ ವಾಹನ ನಿಲುಗಡೆ ಮಾಡತಕ್ಕದ್ದು.

ತುರ್ತು ಸೇವಾ ವಾಹನಗಳಾದ ಅಂಬುಲೆನ್ಸ್, ಅಗ್ನಿಶಾಮಕ ದಳದ ವಾಹನಗಳು, ನೀರಿನ ಟ್ಯಾಂಕರ್, ಕೆ.ಎಸ್.ಆರ್.ಪಿ. ಸಿ.ಆರ್.ಟಿ. ಬಿ.ಬಿ.ಎಂ.ಪಿ. ಹಾಗೂ ಪಿ.ಡಬ್ಲ್ಯೂಡಿ ವಾಹನಗಳು ಪ್ರವೇಶ ದ್ವಾರ –1 ಮುಖಾಂತರ ಪರೇಡ್ ಮೈದಾನದ ಒಳಗೆ ಪ್ರವೇಶಿಸಿ ನಂತರ ಪೋರ್ಟ್ ವಾಲ್ ಹಿಂಭಾದಲ್ಲಿ (ದಕ್ಷಿಣ ಕಡೆಗೆ) ವಾಹನಗಳನ್ನು ನಿಲುಗಡೆ ಮಾಡಬಹುದಾಗಿದೆ.

ಎಲ್ಲಾ ದ್ವಿಚಕ್ರ ವಾಹನಗಳ ಸವಾರರು ತಮ್ಮ ವಾಹನಗಳನ್ನು ಕಾಮರಾಜ ರಸ್ತೆ ಆರ್.ಎಸ್.ಐ. ಗೇಟ್, ಆರ್ಮಿ ಪಬ್ಲಿಕ್ ಶಾಲೆ ಮುಂಬಾಗ, ಮೈನ್ ಗಾರ್ಡ್ ಕ್ರಾಸ್ ರಸ್ತೆ ಸಫೀನಾ ಪ್ಲಾಜಾ ಮುಂಬಾಗ ನಿಲುಗಡೆ ಮಾಡಿ ನಂತರ ಕಾಮರಾಜ ರಸ್ತೆಯಲ್ಲಿರುವ ಪ್ರವೇಶ ದ್ವಾರ 4 ಮತ್ತು 5 ರ ಮುಖಾಂತರ ಕಾಲ್ನಡಿಗೆಯಲ್ಲಿ ಒಳ ಪ್ರವೇಶಿಸಬಹುದಾಗಿದೆ.

ಕಾರ್ ಪಾಸುಗಳಿಲ್ಲದೆ ಇರುವವರು, ತಮ್ಮ ವಾಹನಗಳನ್ನು ಶಿವಾಜಿನಗರ ಬಸ್ ನಿಲ್ದಾಣದ ಒಂದನೇ ಮಹಡಿಯ ಮೇಲೆ ನಿಲುಗಡೆ ಮಾಡಿ, ನಂತರ ಕಾಮರಾಜ ರಸ್ತೆಯ ಪ್ರವೇಶ ದ್ವಾರ 4 ಮತ್ತು 5 ರ ಮುಖಾಂತರ ಕಾಲ್ನಡಿಗೆಯಲ್ಲಿ ಒಳ ಪ್ರವೇಶಿಸಬಹುದಾಗಿದೆ.

ಎಂ.ಜಿ. ರಸ್ತೆ, ಅನಿಲ್ ಕುಂಬ್ಳೇ ವೃತ್ತದಿಂದ ನಿಲ್ದಾಣದ ವರೆಗೆ (ಉತ್ತರ ಭಾಗದಲ್ಲಿ) ಕಾರ್ಯಕ್ರಮದಲ್ಲಿ ಭಾಗವಹಿಸುವ ಶಾಲಾ ಮಕ್ಕಳನ್ನು ಕರೆತರುವ ಬಿ.ಎಂ.ಟಿ.ಸಿ. ಬಸ್ಸುಗಳ ನಿಲುಗಡೆ ಅವಕಾಶ ನೀಡಲಾಗಿದೆ.

ದಿನಾಂಕ 15–8–2018 ರಂದು ಬೆಳಿಗ್ಗೆ 8–30 ಗಂಟೆಯಿಂದ ಬೆಳಿಗ್ಗೆ 10–30 ರ ವರೆಗೆ ಕಬ್ಬನ್‌ರಸ್ತೆಯಲ್ಲಿ ಬಿ.ಆರ್.ವಿ. ಜಂಕ್ಷನ್‌ನಿಂದ ಕಾಮರಾಜ ರಸ್ತೆ ಜಂಕ್ಷನ್‌ವರೆಗೆ ಎರಡೂ ದಿಕ್ಕುಗಳಲ್ಲಿನ ಸಂಚಾರವನ್ನು ನಿರ್ಭಂದಿಸಿ ಈ ಕೆಳಕಂಡಂತೆ ಪರ್ಯಾಯ ಮಾರ್ಗದಲ್ಲಿ ಸಂಚರಿಸುವ ವ್ಯವಸ್ಥೆ ಮಾಡಲಾಗಿದೆ.

ಅ) ಇನ್‌ಫೆಂಟ್ರ ರಸ್ತೆಯಲ್ಲಿ ಮಣಿಪಾಲ್ ಸೆಂಟರ್ ಕಡೆಗೆ ಸಂಚರಿಸುವ ವಾಹನಗಳು ನೇರವಾಗಿ ಇನ್‌ಫೆಂಟ್ರ ರಸ್ತೆ– ಸಫೀನಾ ಪ್ಲಾಜಾ – ಎಡ ತಿರುವು ಪಡೆದು ಮೈನ್‌ಗಾರ್ಡ್ ರಸ್ತೆ–ಆಲೀಸ್ ಸರ್ಕಲ್ –ಡಿಸ್ಪೇನ್ಸರಿ ರಸ್ತೆ–ಕಾಮರಾಜ ರಸ್ತೆ ಮತ್ತು ಡಿಕನ್ಸನ್ ರಸ್ತೆ ಜಂಕ್ಷನ್ –ಬಲಕ್ಕೆ ತಿರುವು ಪಡೆದು ಕಾಮರಾಜ ರಸ್ತೆ–ಕಬ್ಬನ್‌ರಸ್ತೆ ಮತ್ತು ಕಾಮರಾಜ ರಸ್ತೆ ಜಂಕ್ಷನ್ ನಲ್ಲಿ ಎಡಕ್ಕೆ ತಿರುವು ಪಡೆದು, ಕಬ್ಬನ್ ರಸ್ತೆ ಮುಖಾಂತರ ಮಣಿಪಾಲ್ ಸೆಂಟರ್ ಕಡೆಗೆ ಸಾಗಬಹುದಾಗಿದೆ.

ಕಬ್ಬನ್ ರಸ್ತೆಯಲ್ಲಿ, ಮಣಿಪಾಲ್ ಸೆಂಟರ್ ಜಂಕ್ಷನ್‌ನಿಂದ ಬಿ.ಆರ್.ವಿ. ಜಂಕ್ಷನ್ ಕಡೆಗೆ ಬರುವ ವಾಹನಗಳು ಕಾಮರಾಜ ರಸ್ತೆ ಮತ್ತು ಕಬ್ಬನ್ ರಸ್ತೆ ಜಂಕ್ಷನ್‌ನಲ್ಲಿ ಕಾಮರಾಜ ರಸ್ತೆಗೆ ಎಡತಿರುವು ಪಡೆದು, ಕಾವೇರಿ ಆರ್ಟ್ಸ್ ಮತ್ತು ಕ್ರಾಫ್ಟ್ ಜಂಕ್ಷನ್‌ನಲ್ಲಿ ಬಲ ತಿರುವು ಪಡೆದು ಎಂ.ಜಿ. ರಸ್ತೆಯ ಮುಖಾಂತರ ಬಂದು, ಅನಿಲ್‌ಕುಂಬ್ಳೆ ವೃತ್ತದ ಮೂಲಕ ಮುಂದೆ ಸಾಗಬಹುದು.

ಅನಿಲ್ ಕುಂಬ್ಳೆ ವೃತ್ತದಿಂದ ಕಬ್ಬನ್ ರಸ್ತೆ ಕಡೆಗೆ ಬರುವ ವಾಹನಗಳು ನೇರವಾಗಿ ಸೆಂಟ್ರಲ್ ರಸ್ತೆಯಲ್ಲಿ ಸಾಗಿ, ಬಲಕ್ಕೆ ತಿರುವು ಪಡೆದು –ಇನ್‌ಫೆಂಟ್ರಿ ರಸ್ತೆ, ಸಫೀನಾ ಪ್ಲಾಜಾ ಎಡಕ್ಕೆ ತಿರುವು ಪಡೆದು ಮೈನ್‌ಗಾರ್ಡ್ ರಸ್ತೆ–ಅಲಿ ಸರ್ಕಲ್ –ಡಿಸ್ಪೆನ್ಸರಿ ರಸ್ತೆ–ಕಾಮರಾಜ ರಸ್ತೆ ಮತ್ತು ಡಿಕನ್ಸನ್ ರಸ್ತೆ ಜಂಕ್ಷನ್ –ಬಲಕ್ಕೆ ತಿರುವು ಪಡೆದು ಕಾಮರಾಜ ರಸ್ತೆ, ಕಬ್ಬನ್ ರಸ್ತೆ ಮತ್ತು ಕಾಮರಾಜ ರಸ್ತೆ ಜಂಕ್ಷನ್‌ನಲ್ಲಿ ಎಡಕ್ಕೆ ತಿರುವು ಪಡೆದು, ಕಬ್ಬನ್ ರಸ್ತೆ ಮುಖಾಂತಯರ ಮಣಿಪಾಲ್ ಸೆಂಟರ್ ಕಡೆಗೆ ಸಾಗಬಹುದಾಗಿದೆ.

ಎಂ.ಜಿ. ರಸ್ತೆಯಲ್ಲಿ ಕಾವೇರಿ ಆರ್ಟ್ಸ್ ಮತ್ತು ಕ್ರಾಫ್ಟ್ ವೃತ್ತದಿಂದ ಬಂದು, ಕಬ್ಬನ್ ರಸ್ತೆ ಮತ್ತು ಕಾಮರಾಜ ರಸ್ತೆ ಜಂಕ್ಷನ್‌ಗೆ ಹೋಗುವ ವಾಹನಗಳು ನೇರವಾಗಿ ಎಂ.ಜಿ. ರಸ್ತೆಯಲ್ಲಿ ಸಾಗಿ ಅನಿಲ್ ಕುಂಬ್ಳೆ ವೃತ್ತದ ಬಳಿಗೆ ಬಂದು, ಬಲ ತಿರುವು ಪಡೆದು–ಬಿ.ಆರ್.ವಿ. ಜಂಕ್ಷನ್‌ನಲ್ಲಿ ನೇರವಾಗಿ ಸಂಚರಿಸಿ, ಸೆಂಟ್ರಲ್ ಸ್ಟ್ರೀಟ್‌ರಸ್ತೆಯಲ್ಲಿ ಮುಂದೆ ಸಾಗಬಹುದು.

ಭದ್ರತಾ ದೃಷ್ಟಿಯಿಂದ ಪೆರೇಡ್‌ಗೆ ಬರುವ ಎಲ್ಲಾ ಆಹ್ವಾನಿತರು ಹಾಗೂ ಸಾರ್ವಜನಿಕರು ಮೊಬೈಲ್‌ಫೋನ್, ಹೆಲ್ಮೆಟ್, ಕ್ಯಾಮರಾ, ರೇಡಿಯೋ, ಕೊಡೆ ಮುಂತಾದ ವಸ್ತುಗಳನ್ನು ಜೊತೆಯಲ್ಲಿ ಕೊಂಡೊಯ್ಯದಂತೆ ಕೋರಲಾಗಿದೆ. ಇಂತಹ ವಸ್ತುಗಳನ್ನು ಹೊಂದಿರುವವರನ್ನು ಒಳಗೆ ಬಿಡಲಾಗುವುದಿಲ್ಲ. ಎಲ್ಲರೂ ಬೆಳಿಗ್ಗೆ 8–30 ರ ಒಳಗೆ ಮೈದಾನದಲ್ಲಿ ಆಸೀನರಾಗುವಂತೆ ಪ್ರಕಟಣೆ ತಿಳಿಸಿದೆ.

ಸಂಖ್ಯೆ: 819/919

## ಸಂತಾಪ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ)

ಮಾಜಿ ಲೋಕಸಭಾ ಸಭಾಧ್ಯಕ್ಷರಾದ ಶ್ರೀ ಸೋಮನಾಥ್ ಚಟರ್ಜಿ ಅವರ ನಿಧನಕ್ಕೆ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಸಿ.ಪಿ.ಎಂ. ಹಿರಿಯ ಮುಖಂಡರಾಗಿದ್ದ ಅವರು 10 ಬಾರಿ ಸಂಸತ್ ಸದಸ್ಯರಾಗಿ ಅವರದ್ದೇ ಆದ ವೈಶಿಷ್ಟತೆಯನ್ನು ಪ್ರತಿಬಿಂಬಿಸಿದ್ದಾರೆ. ಶ್ರೀಯುತರು ಸಂಸತ್ ಕಾರ್ಯಕಲಾಪಗಳಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿ, ವಿಭಿನ್ನ ಸಂಸದೀಯ ಪಟು ಎಂದು ಪಾತ್ರರಾಗಿದ್ದರು, ಕಮ್ಯೂನಿಸ್ಟ್ ವಿಚಾರದಾರೆಗಳನ್ನು ಬಲವಾಗಿ ಪ್ರತಿಪಾದಿಸಿ, ಉತ್ತಮ ಕಾರ್ಯವನ್ನು ನಿರ್ವಹಿಸಿದ್ದರು.

ಅವರ ನಿಧನದಿಂದ ಲೋಕತಂತ್ರದ ವ್ಯವಸ್ಥೆಯ ಬಹುಮುಖ್ಯ ಕೊಂಡಿಯೊಂದು ಕಳಚಿದಂತಾಗಿದೆ. ಇವರ ಆತ್ಮಕ್ಕೆ ಶಾಂತಿ ಸದ್ಗತಿ ಸಿಗಲೆಂದು ಹಾಗೂ ಇವರ ಕುಟುಂಬಕ್ಕೆ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಅವರು ಸಂತಾಪ ಸೂಚಿಸಿದ್ದಾರೆ.